



ಅರುಣ ಪಿ. ಭಟ್ಟ


## ವಾರಭವಿಷ್ಯ: 13.06.2024ರಿಂದ 19.06.2024ರವರೆಗೆ




ಈ ವಾರದಲ್ಲಿ ದೀರ್ಘಕಾಲದ ನೋವಿನಿಂದ ನೀವು ಪರಿಹಾರ ಪಡೆಯಬಹುದು. ಹಣ ಸಂಪಾದಿಸಲು ಭಿನ್ನ ವಿಧಾನ ಕಂಡುಕೊಳ್ಳಬಹುದು. ನಿಮ್ಮ ಪ್ರಯತ್ನಗಳು ಯಶಸ್ವಿಯಾಗುತ್ತವೆ. ಕುಟುಂಬದ ಸದಸ್ಯರೊಂದಿಗಿನ ಸಂಬಂಧಗಳು ಸುಧಾರಿಸುತ್ತವೆ. ಸಮಾಜದಲ್ಲಿ ನಿಮ್ಮ ಸ್ಥಾನವು ಸುಧಾರಿಸಬಹುದು. ಸಮಸ್ಯೆಯನ್ನು ನಿವಾರಿಸಲು ನಿಮಗೆ ಸಾಧ್ಯವಾಗುತ್ತದೆ. ಶುಭದಿನ 15. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ನಡೆಯುತ್ತಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ವ್ಯಾಪಾರಸ್ಥರಿಗೆ ಉತ್ತಮ ಅವಕಾಶ. ಶುಭದಿನ 18. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.





ನಿಮ್ಮ ವೈಯಕ್ತಿಕ ವರ್ಚಸ್ಸಿನಿಂದ ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಬಹಳ ಕಾಲದಿಂದ ಸ್ಪರ್ಧಾತ್ಮಕ ಪರೀಕ್ಷೆಗಳ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಹೊಸ ವಸ್ತುವೊಂದನ್ನು ಖರೀದಿ ಮಾಡುವ ಪಕ್ಷದಲ್ಲಿ ಖರೀದಿಸುವ ನಿಮ್ಮ ನಿರ್ಧಾರವನ್ನು ಮುಂದಕ್ಕೆ ಹಾಕುವುದೇ ಉತ್ತಮ. ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಶುಭದಿನ 19. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.





ನಿಮ್ಮ ಆದಾಯದಲ್ಲಿ ಈ ವಾರ ಹೆಚ್ಚಳ ಕಾಣಿಸಿಕೊಳ್ಳಲಿದೆ. ಸಾಮಾಜಿಕವಾಗಿ ನಿಮ್ಮ ವರ್ಚಸ್ಸು, ಕೀರ್ತಿ ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶಗಳು ಹೆಚ್ಚಿವೆ. ಕ್ರೀಡಾ ಕ್ಷೇತ್ರದಲ್ಲಿ ಪ್ರಯತ್ನ ಮಾಡುತ್ತಿರುವವರು ಸರಿಯಾದ ದಾರಿಯಲ್ಲಿ ಸಿದ್ಧತೆ ನಡೆಸುವುದರಿಂದ ಯಶಸ್ಸು ಪಡೆಯುವ ಅವಕಾಶ ಹೆಚ್ಚಾಗಿರುತ್ತದೆ. ಶುಭದಿನ 16. ವಿಷ್ಣುಸಹಸ್ರನಾಮ ಓದಿರಿ.




ಉದ್ಯೋಗ ಅಥವಾ ವ್ಯಾಪಾರ ನಿಮಿತ್ತವಾಗಿ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭ ಆಗಲಿದೆ. ಉದ್ಯೋಗ ಸ್ಥಳದಲ್ಲಿ ಸ್ವಲ್ಪಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರು ಪೇರಾಗುತ್ತದೆ. ಸೋದರ–ಸೋದರಿಯರ ಜೊತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಶುಭದಿನ 17. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.





ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಕೆಲಸದ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಂದ ಮೆಚ್ಚುಗೆಯನ್ನು ಪಡೆಯುತ್ತೀರಿ. ಉದ್ಯೋಗದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ವೇಗವಾಗಿ ಕೆಲಸಗಳನ್ನು ಮಾಡಲಿದ್ದೀರಿ. ಶುಭದಿನ 18. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.





ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ– ಸೋದರಿಯರು ಸಹಾಯಕ್ಕೆ ನಿಲ್ಲುತ್ತಾರೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಈ ವಾರ ನೀವು ಕೆಲವು ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ 15. ಆದಿತ್ಯ ಹೃದಯ ಪಠಿಸಿರಿ.





ಕುಟುಂಬ ಸದಸ್ಯರ ಜೊತೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯಕ್ಕೆ ಶ್ರಮ ಹಾಕಲಿದ್ದೀರಿ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಬೇಕಾಗುತ್ತದೆ. ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ. ಶುಭದಿನ 14. ಚಂಡಿ ಪಾರಾಯಣ ಮಾಡಿರಿ.





ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯಗಳನ್ನು ಅಂತಿಮಗೊಳಿಸಲು ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಸಿಬ್ಬಂದಿಯ ನೇಮಕದಲ್ಲಿ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಶುಭದಿನ 16. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.




ಈ ಹಿಂದೆಂದಿಗಿಂತ ಯೋಜನೆಗಳನ್ನು ವೇಗವಾಗಿ ಅನುಷ್ಠಾನಕ್ಕೆ ತರಲು ಉತ್ಸಾಹದಿಂದ ಕಾರ್ಯ ನಿರ್ವಹಿಸುತ್ತೀರಿ. ನಿಮ್ಮ ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ಸಲಕರಣೆಗಳನ್ನು ಸ್ಥಳೀಯ ಮಾರುಕಟ್ಟೆಯಿಂದ ಖರೀದಿಸುವ ಸಾಧ್ಯತೆ ಇದೆ. ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಹಣ ಹೂಡಿಕೆ ಹಾಗೂ ವಿದೇಶ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಶುಭದಿನ 18. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಜೀವನ ಮಟ್ಟ ಉತ್ತಮಗೊಳ್ಳಲಿದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ನಿಮ್ಮ ಸಂಗಾತಿಯ ಭಾವನೆಗಳನ್ನು ಅರ್ಥ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಶುಭದಿನ 19. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ವೈಯಕ್ತಿಕ ಬದುಕು ಸಂತಸದಾಯಕವಾಗಿ ಇರುತ್ತದೆ. ಶುಭದಿನ 17. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.